## ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ :: ಕೇಂದ್ರ ಕಛೇರಿ :: ಬೆಂಗಳೂರು

ಸಂಖ್ಯೆ:ಬೆಂಮಸಾಸಂ/ಕೇಕ/ನೇಮಕ/ಆರ್1/ 7136 /2017–18 ದಿನಾಂಕ:23/03/2018

**ಜಾಹೀರಾತು ಸಂಖ್ಯೆ:1/2018**

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ದರ್ಜೆ–3 ರ ಕಿರಿಯ ಸಹಾಯಕ–ಕಂ–ಡೇಟಾ ಎಂಟ್ರಿ ಆಪರೇಟರ್ ಹುದ್ದೆಗಳನ್ನು ಸಂಸ್ಥೆಯು ಅಳವಡಿಸಿಕೊಂಡಿರುವ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ನೌಕರರ(ಪದವೃಂದ ಮತ್ತು ನೇಮಕಾತಿ) ನಿಯಮಾವಳಿ–1982 ಹಾಗೂ ಅದರ ತಿದ್ದುಪಡಿಗಳ ಅನುಸಾರ ನೇರ ನೇಮಕಾತಿ ಮೂಲಕ ತುಂಬಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ **(ON LINE)** ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಹುದ್ದೆಗಳ ಸಂಖ್ಯೆ ತಾತ್ಕಾಲಿಕವಾಗಿದ್ದು ಆಯ್ಕೆ ಸಮಯ ದಲ್ಲಿ ಮಾರ್ಪಡಿಸಬಹುದಾಗಿರುತ್ತದೆ. ಮೀಸಲಾತಿ ವರ್ಗೀಕರಣ ವಿವರಗಳು ಈ ಕೆಳಕಂಡಂತಿರುತ್ತದೆ.

| ಮೀಸಲು | ಪ.ಜಾ | ಪ.ಪಂ | ವ–1 | 2ಎ | 2ಬಿ | 3ಎ | 3ಬಿ | ಸಾ.ವರ್ಗ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 01 | - | 01 | 01 | 01 | 01 | - | 08 | 13 |
| ಮಹಿಳಾ ಮೀಸಲು | 05 | 01 | - | 05 | - | 01 | 02 | 15 | 29 |
| ಗ್ರಾಮೀಣ ಮೀಸಲು | 04 | 01 | 01 | 04 | 01 | 01 | 01 | 12 | 25 |
| ಕನ್ನಡ ಮಾಧ್ಯಮ | 01 | - | - | 01 | - | - | - | 02 | 04 |
| ಯೋಜನಾನಿರಾಶ್ರಿತರು(ಹಿಂಬಾಕಿ) | 01 | - | - | - | - | - | - | - | 01 |
| ಯೋಜನಾ ನಿರಾಶ್ರಿತರು | 01 | - | - | 01 | - | - | 01 | 02 | 05 |
| ವಿಕಲಚೇತನರು<br>1. ದೃಷ್ಠಿ ಮಾಂದ್ಯತೆಯುಳ್ಳವರಿಗೆ | 01 | 01 | - | 01 | - | - | - | - | 03 |
| 2. ಶ್ರವಣ ದೋಷವುಳ್ಳವರಿಗೆ | - | - | - | - | - | - | - | 01 | 01 |
| 3.ಚಲನ ವಲನ ವೈಕಲ್ಯತೆಉಳ್ಳವರಿಗೆ | - | - | - | - | - | - | - | 01 | 01 |
| 4. ಕುಷ್ಠರೋಗದಿಂದ ಗುಣಮುಖ ರಾದ ಅಂಗವಿಕಲರಿಗೆ/ಬುದ್ದಿ ಮಾಂದ್ಯತೆ/ ಮಾನಸಿಕ ಅಸ್ವಸ್ಥತೆ ಹೊಂದಿದವರಿಗೆ | - | - | - | - | - | - | - | 01 | 01 |
| ಮಾಜಿ ಸೈನಿಕರು | 01 | - | 01 | 01 | 01 | 01 | - | 04 | 09 |
| ಒಟ್ಟು | 15 | 03 | 03 | 14 | 03 | 04 | 04 | 46 | 92 |

**ಟಿಪ್ಪಣಿ:** ಸಮತಲ ಮೀಸಲು ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಅಂತಹ ಸ್ಥಾನಗಳನ್ನು ಆಯಾ ವರ್ಗಕ್ಕೆ ಸೇರಿದ ಸಾಮಾನ್ಯ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ವಿಕಲಚೇತನ ಮೀಸಲಾತಿಯಲ್ಲಿ ಸೂಚಿಸಲಾಗಿರುವ ಅಂಗವಿಕಲತೆಯ ಅಭ್ಯರ್ಥಿಗಳು ದೊರಕದಿದ್ದಲ್ಲಿ ಇತರೆ ವಿಕಲಚೇತನ ಅಭ್ಯರ್ಥಿಗಳಿಂದ ಭರ್ತಿಗೊಳಿಸಲಾಗುವುದು.

**ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಆಯ್ಕೆಗೊಂಡ ಅಭ್ಯರ್ಥಿಗಳು ಕ.ರಾ.ರ.ಸಾ.ಸಂಸ್ಥೆ/ವಾ.ಕ.ರ.ಸಾ.ಸಂಸ್ಥೆ/ಈ.ಕ.ರ.ಸಾ.ಸಂಸ್ಥೆಗಳಿಗೆ ವರ್ಗಾವಣೆ ಕೋರಲು ಅರ್ಹರಲ್ಲ.**

**ಅರ್ಹತೆಗಳು: (ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕ: 25/04/2018ರಂತೆ)**

## I. ಶೈಕ್ಷಣಿಕ ವಿದ್ಯಾರ್ಹತೆ

1) ಪದವಿ ಪೂರ್ವ ಪರೀಕ್ಷೆ (ಪಿಯುಸಿ/PUC)ಯಲ್ಲಿ ಆರ್ಟ್ಸ್ ಅಥವಾ ಸೈನ್ಸ್ ಅಥವಾ ಕಾಮರ್ಸ್‌ನಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಅಂಗೀಕೃತ ಪ್ರಾಧಿಕಾರದಿಂದ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು/ ಐಸಿಎಸ್‌ಸಿ, ಸಿಬಿಎಸ್‌ಸಿ ಯ 10+2 ರಲ್ಲಿ ತೇರ್ಗಡೆ ಹೊಂದಿರಬೇಕು (ಮುಕ್ತ ವಿಶ್ವವಿದ್ಯಾಲಯ/ಮುಕ್ತ ವಿದ್ಯಾಲಯದ ಪಿಯುಸಿ ಅಥವಾ 12ನೇ ತರಗತಿಯನ್ನು ಹಾಗೂ ಜೆಓಸಿ/ಜೆಎಲ್‌ಸಿ/ ಡಿಪ್ಲೋಮ ಗಳನ್ನು ಪರಿಗಣಿಸಲಾಗುವುದಿಲ್ಲ)

   Pass in PUC in Arts or Commerce or Science or Equivalent qualification of recognized Authority, 10+2 of ICSE, CBSE (Excluding PUC or 12th Standard of Open University/Open School, JOC/JLC & Diploma)

www.kpsevaani.com

2) ಕಂಪ್ಯೂಟರ್ ಬೇಸಿಕ್ಸ್, ವಿಂಡೋಸ್, ಎಂ.ಎಸ್. ಆಫೀಸ್, ಕಮ್ಯುನಿಕೇಷನ್ ಅಂಡ್ ಇಂಟರ್‌ನೆಟ್ ಮತ್ತು ಡೇಟಾ ಎಂಟ್ರಿ ಆಪರೇಷನ್‌ನಲ್ಲಿ ಸರ್ಕಾರದ ಅಂಗೀಕೃತ ಸಂಸ್ಥೆಯೊಂದರಿಂದ 6 ತಿಂಗಳ ಸರ್ಟಿಫಿಕೇಟ್ ಕೋರ್ಸ್ ಹೊಂದಿರಬೇಕು ಹಾಗೂ ಕನ್ನಡ ನುಡಿ ಸಾಫ್ಟ್‌ವೇರ್ ತಿಳಿದಿರಬೇಕು.

Six (6) Month's Certificate Course in Computer basics, Windows, MS Office, Communication and Internet and Data Entry operation with the knowledge of Kannada Nudi Software from the Institutions recognized by the Government

## II. ವಯೋಮಿತಿ :

1) ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ 25/4/2018 ರಂದು ಕನಿಷ್ಠ 18 ವರ್ಷಗಳು ಪೂರ್ಣಗೊಂಡಿರಬೇಕು ಹಾಗೂ ಈ ಕೆಳಕಂಡ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

| ವರ್ಗ | ವಯೋಮಿತಿ |
|---|---|
| ಸಾಮಾನ್ಯ ವರ್ಗ | 35 ವರ್ಷಗಳು |
| 2ಎ/2ಬಿ/3ಎ /3ಬಿ | 38 ವರ್ಷಗಳು |
| ಪ.ಜಾತಿ/ಪ.ಪಂ/ ವರ್ಗ–1 | 40 ವರ್ಷಗಳು |

2) ಇಲಾಖಾ ಅಭ್ಯರ್ಥಿಗಳು ಅವರು ಸಂಸ್ಥೆಯಲ್ಲಿ ಪರೀಕ್ಷಣಾರ್ಥಿ ಹುದ್ದೆಗೆ ನೇಮಕಗೊಂಡ ನಂತರ ಪ್ರತೀ ಪೂರ್ಣಗೊಂಡ ಸೇವಾಧಿಗೆ ಒಂದು ವರ್ಷ ವಯೋಮಿತಿ ರಿಯಾಯಿತಿಯಂತೆ ಸೇವಾವಧಿಯ ಗರಿಷ್ಠ 10 ವರ್ಷಗಳಿಗೆ ಮೀರದಂತೆ ವಯೋಮಿತಿ ರಿಯಾಯಿತಿಗೆ ಅರ್ಹರು, ಆದರೆ ಅವರ ವಯಸ್ಸು 45 ವರ್ಷಗಳು ಮೀರಿರಬಾರದು.

3) ಮಾಜಿ ಸೈನಿಕ ಅಭ್ಯರ್ಥಿಗಳು ಭಾರತದ ಸಶಸ್ತ್ರ ಪಡೆಯಲ್ಲಿ ಕನಿಷ್ಠ 15 ವರ್ಷಗಳ ಸೇವೆ ಸಲ್ಲಿಸಿರಬೇಕು ಮತ್ತು ಅವರು ಸಲ್ಲಿಸಿದ ಸೇವೆಯ ಜೊತೆಗೆ 3 ವರ್ಷಗಳ ವಯೋಮಿತಿಯ ರಿಯಾಯಿತಿಗೆ ಅರ್ಹರು, ಆದರೆ ಅವರ ವಯಸ್ಸು 45 ವರ್ಷಗಳು ಮೀರಿರಬಾರದು.

## III. ಜಾತಿ/ವರ್ಗ ಮೀಸಲಾತಿ: ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು:

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ನಮೂನೆ–ಡಿ ರಲ್ಲಿ,

ಆ) ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳು ನಮೂನೆ–ಇ ರಲ್ಲಿ,

ಇ) ಪ್ರವರ್ಗ–2ಎ, 2ಬಿ, 3ಎ, ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ನಮೂನೆ–ಎಫ್ ರಲ್ಲಿ ಚಾಲ್ತಿಯಲ್ಲಿರುವ ಹಾಗೂ ಅರ್ಜಿ ಸಲ್ಲಿಸಲು ನಿಗಧಿಪಡಿಸಲಾಗಿರುವ ಕೊನೆಯ ದಿನಾಂಕ:25/4/2018 ರೊಳಗಾಗಿ ಪಡೆದಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಹೊಂದಿದ್ದಲ್ಲಿ ಮಾತ್ರ ಆಯಾ ಗುಂಪಿನ ಮೀಸಲಾತಿ ಸೌಲಭ್ಯಕ್ಕೆ ಅರ್ಹರಿರುತ್ತಾರೆ.

ಈ)ಪರಿವಾರ, ತಳವಾರ, ಮಾಲೇರು, ಕುರುಬ, ಬೆಸ್ತ ಮತ್ತು ಕೋಳಿ ಜಾತಿಗೆ ಸೇರಿದ ಅಭ್ಯರ್ಥಿಗಳು ಪರಿಶಿಷ್ಠ ಪಂಗಡದ ನಾಯಕ, ಮಲೇರು, ಕಾಡು ಕುರುಬ, ಜೇನು ಕುರುಬ, ಗೊಂಡ, ರಾಜ್‌ಗೊಂಡ, ಕೋಳಿದೋರ ಮತ್ತು ಟೋಕ್ರಿ ಕೋಳಿ ಎಂದು ಜಾತಿ ಪ್ರಮಾಣ ಪತ್ರ ಪಡೆದಿದ್ದಲ್ಲಿ ಅವುಗಳು ಅಸಿಂಧು ಆಗುತ್ತವೆ. ಆದುದರಿಂದ, ಪರಿಶಿಷ್ಠ ಪಂಗಡದ ನಾಯಕ, ಮಾಲೇರು, ಕಾಡು ಕುರುಬ, ಜೇನು ಕುರುಬ, ಗೊಂಡ, ರಾಜ್‌ಗೊಂಡ, ಕೋಳಿದೋರ ಮತ್ತು ಟೋಕ್ರಿ ಕೋಳಿ ಜಾತಿಗೆ ಸೇರಿದ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ: **ಎಸ್‌ಡಬ್ಲ್ಯೂಡಿ /713/ಎಸ್‌ಎಡಿ/93** ದಿನಾಂಕ:11/03/2002 ರನ್ವಯ ದಿನಾಂಕ:11/03/2002ರ ನಂತರ ಹಾಗೂ ಅರ್ಜಿ ಸಲ್ಲಿಸಲು ನಿಗದಿಪಡಿಸಲಾಗಿರುವ ಕೊನೆಯ ದಿನಾಂಕದೊಳಗೆ ಪಡೆದ ಜಾತಿ ಪ್ರಮಾಣ ಪತ್ರವನ್ನು ಹೊಂದಿರಬೇಕು.

## IV. ಗ್ರಾಮೀಣ ಮೀಸಲಾತಿ:

ಅ) ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ:96:ಸಸೇನಿ:2005, ದಿನಾಂಕ:10/8/2005 ರಂತೆ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಾವಳಿಗಳನ್ವಯ 1ನೇ ತರಗತಿಯಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿದ್ದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ,

www.kpscvaani.com

3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರಿಂದ ಪಡೆದ ಪ್ರಮಾಣ ಪತ್ರದ ಮೇಲೆ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಯ ಮೇಲು ಸಹಿ ಮಾಡಿಸಿದ ಪ್ರಮಾಣ ಪತ್ರ ಸಲ್ಲಿಸಿದಲ್ಲಿ ಮಾತ್ರ ಗ್ರಾಮೀಣ ಮೀಸಲಾತಿಗೆ ಅರ್ಹರಾಗುವರು.

ಆ) ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2ನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಮೇಲುಸ್ತರಕ್ಕೆ(Creamy Layer) ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಸಂಬಂಧಪಟ್ಟ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ ಹೊಂದಿರಬೇಕು. (ಇತರೆ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು ಹಾಗೂ ಅಂತಹವರು ಗ್ರಾಮೀಣ ಮೀಸಲಾತಿಗೆ ಅರ್ಹರಾಗುವುದಿಲ್ಲ.

## V. ಕನ್ನಡ ಮಾಧ್ಯಮ ಮೀಸಲಾತಿ :

ಅಭ್ಯರ್ಥಿಯು 1ನೇ ತರಗತಿಯಿಂದ 10ನೇ ತರಗತಿಯವರೆಗಿನ ಎಲ್ಲಾ ತರಗತಿಗಳನ್ನು ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ, ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ/71 /ಸೆನೆನಿ/ 2001, ದಿನಾಂಕ:24/10/2002 ರನ್ವಯ ನಿಗಧಿತ ನಮೂನೆಯಲ್ಲಿ ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರಿಂದ ಸಹಿ ಹಾಗೂ ಮೊಹರು ಪಡೆದ ಪ್ರಮಾಣ ಪತ್ರ ಹೊಂದಿದ್ದಲ್ಲಿ ಮಾತ್ರ ಕನ್ನಡ ಮಾಧ್ಯಮ ಮೀಸಲಾತಿಗೆ ಅರ್ಹರಿರುತ್ತಾರೆ.

## VI. ಯೋಜನಾ ನಿರಾಶ್ರಿತರು :

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ **/23/**ಎಸ್ಆರ್ಆರ್**/99**, ದಿನಾಂಕ:23/11/2000 ರಲ್ಲಿ ತಿಳಿಸಿರುವಂತೆ ಯೋಜನಾ ನಿರಾಶ್ರಿತರ ಮೀಸಲಾತಿಗೆ ಅರ್ಹ ಅಭ್ಯರ್ಥಿಗಳು ನಿಗಧಿತ ನಮೂನೆಯಲ್ಲಿ ಅಧಿಕೃತ ಪ್ರಾಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರದಲ್ಲಿ ಯಾವುದಾದರೂ ಒಂದು ಐಟಂ ಸಂಪೂರ್ಣವಾಗಿ ಅನ್ವಯಿಸಿದಲ್ಲಿ ಮತ್ತು ಸದರಿ ನಮೂನೆಯನ್ನು ಸಮರ್ಪಕವಾಗಿ ಹಾಗೂ ಸಂಪೂರ್ಣವಾಗಿ ಭರ್ತಿ ಮಾಡಿದ ಪಕ್ಷದಲ್ಲಿ ಮಾತ್ರ ಯೋಜನಾ ನಿರಾಶ್ರಿತರ ಮೀಸಲಾತಿಗೆ ಅರ್ಹರಿರುತ್ತಾರೆ. ಆದರೆ ಸದರಿ ಸರ್ಕಾರದ ಆದೇಶದನುಸಾರ ಈ ನಿಯಮ ಜಾರಿಗೆ ಬಂದ ದಿನಾಂಕದಿಂದ ಹಿಂದಕ್ಕೆ 20 ವರ್ಷಗಳ ಪೂರ್ವದಲ್ಲಿ ಭೂಮಿಯನ್ನು ಸ್ವಾಧೀನ ಪಡಿಸಿಕೊಂಡಂತಹ ಪ್ರಕರಣಗಳ ಅಭ್ಯರ್ಥಿಗಳು ಈ ಮೀಸಲಾತಿ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.(ಯೋಜನಾ ನಿರಾಶ್ರಿತರ ಮೀಸಲಾತಿ ಪ್ರಮಾಣ ಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ಅರ್ಜಿಯ ಅಂಕಣದಲ್ಲಿ ನಮೂದಿಸತಕ್ಕದ್ದು).

## VII. ಮಾಜಿ ಸೈನಿಕ ಮೀಸಲಾತಿ:

ಮಾಜಿ ಸೈನಿಕ ಅಭ್ಯರ್ಥಿಯು ಭಾರತದ ಸಶಸ್ತ್ರ ಪಡೆಯಲ್ಲಿ ಕನಿಷ್ಠ 15 ವರ್ಷಗಳ ಸೇವೆ ಸಲ್ಲಿಸಿರುವ ಬಗ್ಗೆ ನಿಗಧಿತ ಡಿಸ್‌ಜಾರ್ಜ್ ಪುಸ್ತಕ ಹೊಂದಿರಬೇಕು.

## VIII. ನಿಗಧಿತ ಶುಲ್ಕ:

**ಅ) ಅರ್ಜಿ ಶುಲ್ಕ:**

| ವರ್ಗ | ಶುಲ್ಕ |
|---|---|
| ಸಾಮಾನ್ಯ ವರ್ಗ, 2ಎ, 2ಬಿ, 3ಎ ಮತ್ತು 3ಬಿ | ರೂ.800/- |
| ಪ.ಜಾತಿ, ಪ.ಪಂಗಡ, ವರ್ಗ-1, ಮಾಜಿ ಸೈನಿಕ ಮತ್ತು ಅಶಕ್ತ ಮಾಜಿ ಸೈನಿಕರ ಅವಲಂಬಿತರಿಗೆ | ರೂ.500/- |

ಆ) ಅರ್ಜಿ ಶುಲ್ಕ ಪಾವತಿ ಮಾಡುವ ವಿಧಾನ:(ಎಲೆಕ್ಟ್ರಾನಿಕ್ ಅಂಚೆ ಕಛೇರಿಗಳಲ್ಲಿ ಮಾತ್ರ ಶುಲ್ಕವನ್ನು ಪಾವತಿಸುವುದು)

www.mybmtc.com ವೆಬ್ ಸೈಟ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ ಕೂಡಲೇ ಅಭ್ಯರ್ಥಿಯು ಚಲನ್ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ಅರ್ಜಿ ಶುಲ್ಕವನ್ನು ಅಂಚೆ ಕಛೇರಿಯ ಕೆಲಸದ ವೇಳೆಯೊಳಗೆ ಯಾವುದೇ ಎಲೆಕ್ಟ್ರಾನಿಕ್ ಅಂಚೆ ಕಛೇರಿಗಳಲ್ಲಿ (Computerised Post Offices only) ಮಾತ್ರ e-payment ಮೂಲಕ ಸಂದಾಯ ಮಾಡಬಹುದಾಗಿರುತ್ತದೆ. ಶುಲ್ಕವನ್ನು ಪಾವತಿಸದೇ

www.kpscvaani.com

ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಅಂಚೆ ಕಛೇರಿಯಲ್ಲಿ ಶುಲ್ಕ ಪಾವತಿಸಿದ ಮೂಲ ಚಲನ್ ಪ್ರತಿಯನ್ನು ದಾಖಲಾತಿ ಪರಿಶೀಲನಾ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ಬೇರೆ ಯಾವುದೇ ರೀತಿ ಶುಲ್ಕ ಪಾವತಿಸಿದ್ದಲ್ಲಿ ಅರ್ಜಿಯನ್ನು ಪರಿಗಣಿಸುವುದಿಲ್ಲ.

ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ ಅಥವಾ ಅದನ್ನು ಸಂಸ್ಥೆಯು ನಡೆಸುವ ಇತರೆ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

## IX. ಅರ್ಜಿಯನ್ನು ಸಲ್ಲಿಸುವ ವಿಧಾನ ಮತ್ತು ಕೊನೆಯ ದಿನಾಂಕ:

1) ಅರ್ಜಿಯನ್ನು ಕಡ್ಡಾಯವಾಗಿ ಆನ್‌ಲೈನ್ ಮುಖಾಂತರವೇ ಬೆಮಸಾಸಂಸ್ಥೆಯ ವೆಬ್‌ಸೈಟ್ www.mybmtc.com ಮೂಲಕ ಸಲ್ಲಿಸಬೇಕು

2. **ದಿನಾಂಕ: 05.04.2018 ರಿಂದ 25.04.2018ರವರೆಗೆ ವೆಬ್‌ಸೈಟ್ ತೆರೆದಿರುತ್ತದೆ.** ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ 25.04.2018ರೊಳಗಾಗಿ ಆನ್‌ಲೈನ್‌ನಲ್ಲಿ ಸಲ್ಲಿಸಬಹುದಾಗಿರುತ್ತದೆ ಮತ್ತು ಅರ್ಜಿ ಸಲ್ಲಿಸಿದ ನಂತರ ದೊರೆಯುವ ಚಲನ್ ಪ್ರತಿಯನ್ನು ಪಡೆದು ಎಲೆಕ್ಟ್ರಾನಿಕ್ ಅಂಚೆ ಕಛೇರಿಯಲ್ಲಿ ಶುಲ್ಕವನ್ನು ಪಾವತಿಸಲು ದಿನಾಂಕ:27/4/2018ಕೊನೆಯ ದಿನಾಂಕವಾಗಿರುತ್ತದೆ.

3. ಅಭ್ಯರ್ಥಿಗಳು ಒಂದು ಬಾರಿ ಮಾತ್ರ ಅರ್ಜಿಯನ್ನು ಸಲ್ಲಿಸಬಹುದಾಗಿದ್ದು, ಒಮ್ಮೆ ಸಲ್ಲಿಸಿದ ಅರ್ಜಿಯನ್ನು ಯಾವುದೇ ಕಾರಣದಿಂದಲೂ ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ. ಆದ್ದರಿಂದ ಅಭ್ಯರ್ಥಿಗಳು ಸೂಚನೆಗಳನ್ನು ಓದಿ, ಅರ್ಥ ಮಾಡಿಕೊಂಡ ನಂತರ ಅರ್ಜಿಯನ್ನು ಆನ್‌ಲೈನ್‌ನಲ್ಲಿ ಭರ್ತಿ ಮಾಡಿ ಸಲ್ಲಿಸತಕ್ಕದ್ದು ಹಾಗೂ ಅರ್ಜಿ ಸಲ್ಲಿಸಿದ ನಂತರ ಅರ್ಜಿಯ ಪ್ರತಿಯನ್ನು ಮತ್ತು ಅಂಚೆ ಕಛೇರಿ ಚಲನ್ ಪ್ರತಿಗಳನ್ನು ಮುದ್ರಿಸಿಕೊಳ್ಳುವುದು.

4. ಮುದ್ರಿತ ಅರ್ಜಿ ಮತ್ತು ಅರ್ಜಿ ಶುಲ್ಕ ಪಾವತಿಯ ಅಂಚೆ ಕಛೇರಿ ಚಲನ್ ಪ್ರತಿಗಳನ್ನು ಅಭ್ಯರ್ಥಿಗಳು ತಮ್ಮ ಬಳಿ ಇಟ್ಟುಕೊಂಡು ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸುವುದು.

## X. ಆಯ್ಕೆ ವಿಧಾನ:

1) ಅರ್ಜಿ ಸಲ್ಲಿಸಿದ ಎಲ್ಲಾ ಅಭ್ಯರ್ಥಿಗಳಿಗೆ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯನ್ನು ನಡೆಸಲಾಗುತ್ತದೆ.
2) ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯನ್ನು ಬೆಂಗಳೂರು ನಗರ ವ್ಯಾಪ್ತಿಯ ಕೇಂದ್ರಗಳಲ್ಲಿ ಮಾತ್ರ ನಡೆಸಲಾಗುವುದು
3) ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯಲ್ಲಿ ಕನಿಷ್ಠ ಶೇಕಡ 30 ಅಥವಾ ಅದಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿದ ಅಭ್ಯರ್ಥಿಗಳನ್ನು ಮಾತ್ರ ಆಯ್ಕೆ ಪ್ರಕ್ರಿಯೆಗೆ ಅರ್ಹರೆಂದು ಪರಿಗಣಿಸಲಾಗುವುದು.
4) ಅರ್ಹ ಅಭ್ಯರ್ಥಿಗಳು ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳಲ್ಲಿ ಶೇಕಡ 75 ಅಂಕಗಳು ಹಾಗೂ ಹುದ್ದೆಗೆ ನಿಗಧಿತ ವಿದ್ಯಾರ್ಹತೆಯಲ್ಲಿ ಗಳಿಸಿರುವ ಅಂಕಗಳಲ್ಲಿ ಶೇಕಡ 25 ಅಂಕಗಳನ್ನು ಸೇರಿಸಿ ಮೆರಿಟ್ ಆಧಾರದ ಮೇಲೆ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳ ಅನುಸಾರ 1:5 ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಮೂಲ ದಾಖಲಾತಿಗಳ ಪರಿಶೀಲನೆಗೆ ಒಳಪಡಿಸಲಾಗುವುದು

## XI . ತರಬೇತಿ ಅವಧಿ ಭತ್ಯೆ ಮತ್ತು ವೇತನ ಶ್ರೇಣಿ:

i) ಆಯ್ಕೆಯಾದ ಅಭ್ಯರ್ಥಿಗಳನ್ನು ಎರಡು ವರ್ಷಗಳ ಕಾಲದ ವೃತ್ತಿ ತರಬೇತಿಯಲ್ಲಿ ನಿಯೋಜಿಸಲಾಗುವುದು. ಈ ತರಬೇತಿ ಅವಧಿಯಲ್ಲಿ ಮಾಸಿಕ ರೂ. 9250–00 ಗಳನ್ನು ತರಬೇತಿ ಭತ್ಯೆಯನ್ನಾಗಿ ನೀಡಲಾಗುವುದು:

ii) ಆಯ್ಕೆಗೊಂಡ ಅಭ್ಯರ್ಥಿಗಳು ಎರಡು ವರ್ಷಗಳ ವೃತ್ತಿ ತರಬೇತಿಯನ್ನು ತೃಪ್ತಿಕರವಾಗಿ ಪೂರೈಸಿದಲ್ಲಿ, ಅವರನ್ನು ಖಾಯಂ ಪೂರ್ವ ಪರೀಕ್ಷಾರ್ಥ ಸೇವೆಯಲ್ಲಿ ನೇಮಕಗೊಳಿಸಿ ರೂ.12590–170–12930–250–14180–320–15780–420–16620–530–18210–640–19490 ರ ಕಾಲಿಕ ವೇತನ ಶ್ರೇಣಿಯನ್ನು ನಿಗಧಿಪಡಿಸಲಾಗುವುದು.

www.kpscvaani.com

## XII. ವಿಶೇಷ ಸೂಚನೆಗಳು:

1) ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಸಂಸ್ಥೆಯ ವೆಬ್‌ಸೈಟ್ www.mybmtc.com ಮತ್ತು ಸಂಸ್ಥೆಯ ಸೂಚನಾ ಫಲಕದಲ್ಲಿ ಹಾಗೂ ಅರ್ಹತಾ ಪಟ್ಟಿ ಪ್ರಕಟಿಸಿರುವ ಬಗ್ಗೆ ಮಾಹಿತಿಯನ್ನು ಪ್ರಮುಖ ಕನ್ನಡ ದಿನಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದು. 1:5 ರ ಅರ್ಹತಾ ಪಟ್ಟಿಯಲ್ಲಿ ಸೇರ್ಪಡೆಗೊಂಡ ಅರ್ಹ ಅಭ್ಯರ್ಥಿಗಳು ಕರೆಪತ್ರವನ್ನು ವೆಬ್‌ಸೈಟ್‌ನಿಂದ ಮುದ್ರಿಸಿಕೊಂಡು ಕರೆಪತ್ರದಲ್ಲಿ ಸೂಚಿಸಲಾದ ದಿನಾಂಕ ಮತ್ತು ಸಮಯಕ್ಕೆ ಸರಿಯಾಗಿ ಮೂಲ ದಾಖಲಾತಿಗಳ ಪರಿಶೀಲನೆಗೆ ಹಾಜರಾಗುವುದು. ಅರ್ಹತಾ ಪಟ್ಟಿಯಲ್ಲಿ ಸೇರ್ಪಡೆಗೊಂಡ ಅಭ್ಯರ್ಥಿಗಳಿಗೆ ಮೂಲ ದಾಖಲಾತಿಗಳ ಪರಿಶೀಲನೆಗೆ ಅಂಚೆಯ ಮೂಲಕ ಪ್ರತ್ಯೇಕ ಕರೆಪತ್ರಗಳನ್ನು ಕಳುಹಿಸಲಾಗುವುದಿಲ್ಲ.

2) ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿರುವಂತೆ ಈ ಕೆಳಕಂಡ ಮೂಲ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಲಾಗಿರುವ ಕೊನೆಯ ದಿನಾಂಕದೊಳಗೆ ಹೊಂದಿರಬೇಕು ಹಾಗೂ ಸಂಸ್ಥೆಯು ಮೂಲ ದಾಖಲಾತಿಗಳನ್ನು ಪರಿಶೀಲನೆಗೆ ಸೂಚಿಸಿದಾಗ ತಪ್ಪದೇ ಹಾಜರುಪಡಿಸತಕ್ಕದ್ದು.

ಅ) ಅಂಚೆ ಕಛೇರಿಯಲ್ಲಿ ಅರ್ಜಿ ಶುಲ್ಕ ಪಾವತಿಸಿದ ಚಲನ್‌ನ ಪ್ರತಿ.

ಆ) ಹುದ್ದೆಗೆ ನಿಗಧಿ ಪಡಿಸಲಾಗಿರುವ ವಿದ್ಯಾರ್ಹತೆಯ ಅಂಕಪಟ್ಟಿ

ಇ) ಎಸ್.ಎಸ್.ಎಲ್.ಸಿ. ಅಂಕಪಟ್ಟಿಯಲ್ಲಿ ಜನ್ಮ ದಿನಾಂಕವನ್ನು ನಮೂದಿಸಿರದಿದ್ದ ಪಕ್ಷದಲ್ಲಿ ಜನ್ಮ ದಿನಾಂಕ ದೃಢೀಕರಣಕ್ಕಾಗಿ ಶಾಲಾ ವರ್ಗಾವಣಾ ಪ್ರಮಾಣ ಪತ್ರ / ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.

ಈ) ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)

ಉ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ, ಮತ್ತು 3ಬಿ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ).

ಊ) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)

ಋ) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

ಎ) ಯೋಜನಾ ನಿರಾಶ್ರಿತ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

ಏ) ಇಲಾಖಾ ಅಭ್ಯರ್ಥಿಗಳು ಸೇವೆ ಸಲ್ಲಿಸುತ್ತಿರುವ ಬಗ್ಗೆ ಅವರು ಅರ್ಜಿ ಸಲ್ಲಿಸಲು ಆಕ್ಷೇಪಣೆ ಇಲ್ಲವೆಂಬ ಪ್ರಮಾಣ ಪತ್ರವನ್ನು ಸಂಬಂಧಿಸಿದ ನೇಮಕಾತಿ ಪ್ರಾಧಿಕಾರಸ್ಥರಿಂದ ಪಡೆದುಕೊಂಡಿರಬೇಕು.

## XII. ಇತರೆ ಸೂಚನೆಗಳು:

1) ನೈತಿಕ ದುರ್ನಡತೆಯಿಂದಾಗಿ / ನೀತಿಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ಈ ಸಂಸ್ಥೆಯಲ್ಲಿ ಅಥವಾ ರಾಜ್ಯ / ಕೇಂದ್ರ / ಸ್ಥಳೀಯ ಸಂಸ್ಥೆ / ಕೈಗಾರಿಕಾ / ವಾಣಿಜ್ಯಕ್ಕೆ ಸಂಬಂಧಪಟ್ಟ ಅಥವಾ ರಾಜ್ಯ ಸಾರಿಗೆ ಅಧೀನದಲ್ಲಿರುವ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ / ನೀತಿ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ / ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ / ವಜಾ ಆಗಿದ್ದಲ್ಲಿ ಕಂಡು ಬಂದಲ್ಲಿ ನೇಮಕಾತಿಗೆ ಅನರ್ಹರಾಗುತ್ತಾರೆ.

2) ಅಭ್ಯರ್ಥಿಗಳು ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿ ಆಯ್ಕೆ ಆದಲ್ಲಿ ಅಂತಹ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ.

3) ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

4) ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಅರ್ಜಿಯು ತಿರಸ್ಕೃತವಾದಲ್ಲಿ ಅಥವಾ ಯಾವುದೇ ಸೌಲಭ್ಯದಿಂದ ಅವರು ವಂಚಿತರಾದಲ್ಲಿ ಅದಕ್ಕೆ ಅಭ್ಯರ್ಥಿಗಳೇ ನೇರ ಜವಾಬ್ದಾರರು.

5) ಅಭ್ಯರ್ಥಿಗಳು ಪ.ಜಾತಿ / ಪ.ಪಂ. / ವರ್ಗ-1/**II**ಎ/**II**ಬಿ/**III**ಎ/**III**ಬಿ ಅಡಿಯಲ್ಲಿ ಹಾಗೂ ಇತರೆ ಗ್ರಾಮೀಣ / ಮಾಜಿ ಸೈನಿಕ/ ಕನ್ನಡ ಮಾಧ್ಯಮ **(horizontal reservation)** ಇತ್ಯಾದಿಗಳ

www.kpscvaani.com

ಮೀಸಲಾತಿಗಳನ್ನು ಕೋರುತ್ತಿದ್ದಲ್ಲಿ ಕರ್ನಾಟಕ ಸರ್ಕಾರವು ನಿಗಧಿಪಡಿಸಿರುವ ಅರ್ಹತೆಗಳ ಬಗ್ಗೆ (ಕ್ರೈಟೀರಿಯ/Criteria) ಸರಿಯಾಗಿ ತಿಳಿದುಕೊಂಡು ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪ್ರಮಾಣ ಪತ್ರಗಳನ್ನು ಹೊಂದಿರತಕ್ಕದ್ದು.

6) ಆಯ್ಕೆಗೊಂಡು ಸೇವೆಯಲ್ಲಿ ಖಾಯಂಗೊಳ್ಳುವ ಅಭ್ಯರ್ಥಿಗಳು ಉಪಧನ ಪಾವತಿ ಕಾಯ್ದೆ 1972 ರನ್ವಯ ಉಪಧನ ಪಡೆಯಲು ಅರ್ಹರು.

7) ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ಕನ್ನಡವನ್ನು ಅಧ್ಯಯನ ಮಾಡದೆ ಇದ್ದಲ್ಲಿ ಅಯ್ಕೆಗೊಂಡ ಅಭ್ಯರ್ಥಿಗಳು ಸಂಸ್ಥೆಯ ವತಿಯಿಂದ ನಡೆಸುವ ಕನ್ನಡ ಭಾಷಾ ಜ್ಞಾನದ ಪರೀಕ್ಷೆಯಲ್ಲಿ ಒಂದೇ ಅವಕಾಶದಲ್ಲಿ ಉತ್ತೀರ್ಣರಾಗಬೇಕು ಇಲ್ಲದಿದ್ದಲ್ಲಿ ಅವರ ಆಯ್ಕೆಯನ್ನು ರದ್ದುಗೊಳಿಸಲಾಗುವುದು.

8) ಸುಳ್ಳು ಮಾಹಿತಿ ಅಥವಾ ನಕಲಿ ಪ್ರಮಾಣ ಪತ್ರ / ದಾಖಲಾತಿಗಳನ್ನು ಸಲ್ಲಿಸಿ ನೌಕರಿ ಪಡೆದಿರುವುದು ಯಾವುದೇ ಸಂದರ್ಭದಲ್ಲಿ ಕಂಡುಬಂದಲ್ಲಿ ಅವರನ್ನು ಯಾವುದೇ ಮುನ್ಸೂಚನೆ ನೀಡದೇ ನೌಕರಿಯಿಂದ ವಜಾ ಮಾಡುವುದರ ಜೊತೆಗೆ ಅವರ ವಿರುದ್ದ ಕಾನೂನು ರೀತಿಯ ಕ್ರಮ ತೆಗೆದುಕೊಳ್ಳಲಾಗುವುದು.

9) ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ನಿರ್ಧಾರವೇ ಅಂತಿಮವಾಗಿರುತ್ತದೆ.

10) ಅಭ್ಯರ್ಥಿಯು ಯಾವುದೇ ವಿಧವಾದ ಪ್ರಚಾರ ಮಾಡುವ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಲ್ಲಿ ಅವರನ್ನು ಯಾವ ಮುನ್ಸೂಚನೆ ನೀಡದೇ ಅವರನ್ನು ಅನರ್ಹಗೊಳಿಸಲಾಗುವುದು.

11) ನೇಮಕಾತಿಯ ವಿವಿಧ ಹಂತಕ್ಕೆ ಸಂಬಂಧಪಟ್ಟ ಎಲ್ಲಾ ವಿವರಗಳನ್ನು ಸಂಸ್ಥೆಯ ವೆಬ್‌ಸೈಟ್ www.mybmtc.com ನಲ್ಲಿ ಪಡೆಯಬಹುದಾಗಿರುತ್ತದೆ. ಆದ್ದರಿಂದ, ನೇಮಕಾತಿ ಪ್ರಕ್ರಿಯೆಗಳ ಬಗ್ಗೆ ಅಭ್ಯರ್ಥಿಗಳು ಯಾವುದೇ ರೀತಿಯ ಪತ್ರ ವ್ಯವಹಾರ ಅಥವಾ ವಿಚಾರಣೆಗಳಿಗೆ ಅಸ್ಪದವಿರುವುದಿಲ್ಲ.

**12) ಪ್ರಚಲಿತ ಮೀಸಲಾತಿ ನಿಯಮಾನುಸಾರ ಹಾಗೂ ನಿಗಧಿತ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳ ಶೇಕಡ 25 ರಷ್ಟು ಅಂಕಗಳನ್ನು ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಶೇಕಡ 75 ರಷ್ಟಕ್ಕೆ ಸೇರಿಸಿ ಅರ್ಹತಾ ಆಧಾರದ ಮೇಲೆ ಆಯ್ಕೆ ಮಾಡುವುದರಿಂದ ಅಭ್ಯರ್ಥಿಗಳು ಯಾವುದೇ ಆಮಿಷಕ್ಕೆ ಒಳಗಾಗಬಾರದು.**

ಸಹಿ\-

**ವ್ಯವಸ್ಥಾಪಕ ನಿರ್ದೇಶಕರು.**

ಪ್ರತಿಯನ್ನು ಗೌರವಪೂರ್ವಕವಾಗಿ: ಮಾನ್ಯ ಅಧ್ಯಕ್ಷರು/ಉಪಾಧ್ಯಕ್ಷರು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ರವರ ಆಪ್ತ ಕಾರ್ಯದರ್ಶಿ ರವರ ಮಾಹಿತಿಗಾಗಿ ಹಾಗೂ ಮಾನ್ಯರ ಗಮನಕ್ಕೆ ತರಲು ಕೋರಲಾಗಿದೆ.

ಪ್ರತಿಯನ್ನು ಗೌರವಪೂರ್ವಕವಾಗಿ: ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ರವರ ಮಾಹಿತಿಗಾಗಿ.

ಪ್ರತಿಯನ್ನು: ವ್ಯವಸ್ಥಾಪಕ ನಿರ್ದೇಶಕರು, ವಾ ಕ ರ ಸಾ ಸಂಸ್ಥೆ,/ ಈ ಕ ರ ಸಾ ಸಂಸ್ಥೆ ರವರ ಮಾಹಿತಿಗಾಗಿ.

ಪ್ರತಿಯನ್ನು: ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ, 4ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರ ಮಾಹಿತಿಗಾಗಿ

ಪ್ರತಿಯನ್ನು: ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್‌ವ್ಯವಸ್ಥೆ ಇಲಾಖೆ, ಬೆಂಗಳೂರು ರವರ ಮಾಹಿತಿಗಾಗಿ

ಪ್ರತಿಯನ್ನು: ನಿರ್ದೇಶಕರು, ವೃತ್ತಿ ಮತ್ತು ಉದ್ಯೋಗ ವಿನಿಮಯ ಕೇಂದ್ರ, ಬೆಂಗಳೂರು ರವರ ಮಾಹಿತಿಗಾಗಿ

ಪ್ರತಿಯನ್ನು: ಉದ್ಯೋಗಾಧಿಕಾರಿ, ಉದ್ಯೋಗ ವಿನಿಮಯ ಕೇಂದ್ರ(ತಾಂತ್ರಿಕ), ಏಶಿಯಾಟಿಕ್ ಬಿಲ್ಡಿಂಗ್, ಕೆಂಪೇಗೌಡ ರಸ್ತೆ, ಬೆಂಗಳೂರು ರವರ ಮಾಹಿತಿಗಾಗಿ

ಪ್ರತಿಯನ್ನು: ಎಲ್ಲಾ ವಿಭಾಗೀಯ ನಿಯಂತ್ರಣಾಧಿಕಾರಿಗಳು, ಕ.ರಾ.ರ.ಸಾ.ಸಂಸ್ಥೆ, ವಾ.ಕ.ರ.ಸಾ.ಸಂಸ್ಥೆ, ಈ.ಕ.ರ.ಸಾ.ಸಂಸ್ಥೆ, ಬೆಮಸಾಸಂಸ್ಥೆ ರವರ ಮಾಹಿತಿಗಾಗಿ ಹಾಗೂ ಈ ಪ್ರಕಟಣೆಯನ್ನು ತಮ್ಮ ವಿಭಾಗೀಯ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.

ಪ್ರತಿಯನ್ನು: ಎಲ್ಲಾ ಇಲಾಖಾ ಮುಖ್ಯಸ್ಥರು, ಬೆಂ.ಮ.ಸಾ.ಸಂಸ್ಥೆ ರವರ ಮಾಹಿತಿಗಾಗಿ.

ಪ್ರತಿಯನ್ನು: ಎಲ್ಲಾ ಘಟಕ ವ್ಯವಸ್ಥಾಪಕರು, ಬಸ್ ನಿಲ್ದಾಣಗಳ ಸಹಾಯಕ ಸಂಚಾರ ವ್ಯವಸ್ಥಾಪಕರು, ಬೆಂ.ಮ.ಸಾ.ಸಂಸ್ಥೆ ರವರ ಮಾಹಿತಿಗೆ ಹಾಗೂ ಈ ಪ್ರಕಟಣೆಯನ್ನು ಸೂಚನಾಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ.

www.kpscvaani.com